ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
**ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ**

ಸ್ವಚ್ಛ ಭಾರತ
ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ

# ಬುಕ್ಕಾಂಬುಧಿ ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣ ಸಾಕಾರ;

*ಗ್ರಾಮವೀಗ ಮತ್ತಷ್ಟು ಸುಂದರ*




ತ್ಯಾಜ್ಯವು ಪರಿಸರ ಹಾಗೂ ಮನುಷ್ಯನ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತವೆ. ಕಸ ಅಥವಾ ತ್ಯಾಜ್ಯವನ್ನು ಸಾಮಾನ್ಯವಾಗಿ ಹಸಿ ಕಸ, ಒಣ ಕಸ, ಅಪಾಯಕಾರಿ ಕಸ ಹೀಗೆ ವಿವಿಧ ವರ್ಗಗಳಾಗಿ ವಿಂಗಡಿಸಬಹುದು. ಗ್ರಾಮೀಣ ಪ್ರದೇಶಗಳ ಜನರಲ್ಲಿ ತ್ಯಾಜ್ಯ ನಿರ್ವಹಣೆ ಕುರಿತು ಅರಿವಿನ ಕೊರತೆಯಿದ್ದು, ಸಾಂಕ್ರಾಮಿಕ ರೋಗಗಳ ಭೀತಿ ಸರ್ವೇಸಾಮಾನ್ಯವಾಗಿತ್ತು. ಇಂಥಾ ಸಂದರ್ಭದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಗ್ರಾಮೀಣ ಪ್ರದೇಶದಲ್ಲಿ ತ್ಯಾಜ್ಯ ನಿರ್ವಹಣೆ ಹಾಗೂ ಸ್ವಚ್ಛತೆ ಕುರಿತು ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. ಅದರ ಭಾಗವಾಗಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಘನ ತ್ಯಾಜ್ಯ ನಿರ್ವಹಣೆಗಾಗಿ ಸ್ವಚ್ಛ ಭಾರತ್ ಮಿಷನ್(ಗ್ರಾಮೀಣ) ಯೋಜನೆಯಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ ಘನ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣಕ್ಕೆ ಅವಕಾಶ ನೀಡಲಾಗಿದೆ. ಮನೆ ಮನೆಗೆ ತೆರಳಿ ಕಸ ಸಂಗ್ರಹಿಸಿ, ಘನತ್ಯಾಜ್ಯ ವಿಲೇವಾರಿ ಘಟಕದ ಸಂಪೂರ್ಣ ನಿರ್ವಹಣೆಗಾಗಿ ಸ್ವ-ಸಹಾಯ ಸಂಘಗಳ ಒಕ್ಕೂಟದ ಸದಸ್ಯರೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿರುತ್ತದೆ.

ಚಿಕ್ಕಮಗಳೂರು ಜಿಲ್ಲೆ ಅಜ್ಜಂಪುರ ತಾಲೂಕಿನ ಬುಕ್ಕಾಂಬುಧಿ ಗ್ರಾಮ ಪಂಚಾಯಿತಿಯು ಗ್ರೇಡ್-1 ಪಂಚಾಯಿತಿಯಾಗಿದ್ದು; ಈ ಗ್ರಾಮ ಪಂಚಾಯಿತಿಯು ಬುಕ್ಕಾಂಬುಧಿ, ಕಣಬಗಟ್ಟೆ, ಬಿಲ್ಲಹಳ್ಳಿ, ನಾಗಬೋವನಹಳ್ಳಿ, ಮಾಕನಹಳ್ಳಿ, ಹರಿಯನಹಳ್ಳಿ ಹಾಗೂ ಡಣಾಯಕಪುರ ಗ್ರಾಮಗಳನ್ನು ಒಳಗೊಂಡಿದೆ. ಸುಮಾರು 6573 ಜನಸಂಖ್ಯೆ ಇರುವ ದೊಡ್ಡ ಗ್ರಾಮ ಪಂಚಾಯಿತಿ ಇದಾಗಿದ್ದು, ಪ್ರತಿನಿತ್ಯ ತ್ಯಾಜ್ಯ ನಿರ್ವಹಣೆಯು ಸವಾಲಿನ ಕೆಲಸವಾಗಿತ್ತು. ಎಲ್ಲಾ ಗ್ರಾಮಗಳಿಂದ ಸಂಗ್ರಹವಾದ ತ್ಯಾಜ್ಯಗಳನ್ನು ಬುಕ್ಕಂಬುದಿ ಗ್ರಾಮ ಪಂಚಾಯಿತಿಗೆ ಸೇರಿದ ಹಳೆ ಕಟ್ಟಡದಲ್ಲಿ ಸಂಗ್ರಹಿಸಲಾಗುತ್ತಿತ್ತು.

## ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣ

ದೊಡ್ಡ ಪ್ರಮಾಣದಲ್ಲಿ ಸಂಗ್ರಹವಾಗುತ್ತಿದ್ದ ತ್ಯಾಜ್ಯವನ್ನು ಸ್ಥಳಾವಕಾಶದ ಕೊರತೆಯಿಂದಾಗಿ ವಿಂಗಡಿಸುವುದು ಹಾಗೂ ವಿಲೇವಾರಿ ಮಾಡುವುದು ಗ್ರಾಮ ಪಂಚಾಯಿತಿಗೆ ಕಷ್ಟವಾಗುತ್ತಿತ್ತು. ಅಷ್ಟೇ ಅಲ್ಲದೆ ಸುತ್ತಮುತ್ತ ವಾಸಿಸುವ ಸಾರ್ವಜನಿಕರಿಗೂ ತೊಂದರೆಯಾಗುತ್ತಿತ್ತು. ಆಗ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಗ್ರಾಮದ ಸಾರ್ವಜನಿಕರ ಹಿತದೃಷ್ಟಿಯಿಂದ ಬುಕ್ಕಾಂಬುಧಿ ಗ್ರಾಮದಿಂದ ಹೊರಭಾಗದಲ್ಲಿರುವ ಸರ್ವೆ ನಂಬರ್ 445ರ ಸರ್ಕಾರಿ ಜಮೀನಿನಲ್ಲಿ ಸ್ಥಳವನ್ನು ಗುರುತಿಸಿ ಮನರೇಗಾ ಯೋಜನೆಯಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣ ಮಾಡಲು ಗ್ರಾಮ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದರು. ಕೊನೆಗೂ ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣವಾಯ್ತು.



# ಸ್ವ-ಸಹಾಯ ಸಂಘದ ಮಹಿಳೆಯರಿಗೆ ಆರ್ಥಿಕ ಬಲ

ಘನತ್ಯಾಜ್ಯ ವಿಲೇವಾರಿ ಘಟಕವು 2025ರ ಮಾರ್ಚ್ ತಿಂಗಳಿನಿಂದ ಕಾರ್ಯಾರಂಭ ಮಾಡಲಾಗಿದ್ದು, ದೊಡ್ಡ ಗ್ರಾಮ ಪಂಚಾಯಿತಿಯಾದ ಕಾರಣ ಮನೆ ಮನೆಗೆ ತೆರಳಿ ಕಸ ಸಂಗ್ರಹಿಸಲು ಟ್ರ್ಯಾಕ್ಟರ್ ವ್ಯವಸ್ಥೆ ಮಾಡಲಾಗಿದೆ. ಕಸ ಸಂಗ್ರಹಣೆಗೆ ಎಲ್ಲಾ ಗ್ರಾಮಗಳಿಗೂ ಸಂಬಂಧಿಸಿದಂತೆ ವೇಳಾಪಟ್ಟಿಯನ್ನೂ ಸಿದ್ದಪಡಿಸಲಾಗಿದೆ. ಪ್ರತಿದಿನ ಒಂದೊಂದು ಗ್ರಾಮಗಳಲ್ಲಿ ಕಸ ಸಂಗ್ರಹಿಸುವ ಜೊತೆಗೆ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನವಾದ ಬುಕ್ಕಾಂಬುಧಿ ಗ್ರಾಮದಲ್ಲಿ ಪ್ರತಿದಿನ ಬೆಳಗ್ಗೆ, ಮಧ್ಯಾಹ್ನ ಹಾಗೂ ಸಂಜೆ ಕಸ ಸಂಗ್ರಹಿಸಲಾಗುತ್ತಿದೆ. ಘನತ್ಯಾಜ್ಯ ವಿಲೇವಾರಿ ಘಟಕದ ಸಂಪೂರ್ಣ ನಿರ್ವಹಣೆಯನ್ನು ಶ್ರೀ ಅಂಜನೇಯ ಸ್ತ್ರೀ ಶಕ್ತಿ ಸಂಘದ ಮಹಿಳೆಯರಿಗೆ ವಹಿಸಿಕೊಡಲಾಗಿದೆ. ಸ್ವ-ಸಹಾಯ ಸಂಘದ ಇಬ್ಬರು ಸದಸ್ಯರು ಕಸ ಸಂಗ್ರಹಿಸಲು ನಿಗದಿಪಡಿಸಲಾದ ಟ್ರ್ಯಾಕ್ಟರ್‌ನಲ್ಲಿ ಪ್ರತಿದಿನ ಮನೆ ಮನೆಗೆ ತೆರಳಿ ಹಸಿ ಕಸ ಮತ್ತು ಒಣ ಕಸಗಳನ್ನು ಸಂಗ್ರಹಿಸುತ್ತಾರೆ. ಮೂವರು ಮಹಿಳೆಯರು ಘನ ತ್ಯಾಜ್ಯ ಘಟಕದಲ್ಲಿ ಕಸ ವಿಂಗಡಣೆ ಕಾರ್ಯ ಮಾಡುತ್ತಾರೆ. ಇನ್ನಿಬ್ಬರು ಮಹಿಳೆಯರಿಗೆ ಘನತ್ಯಾಜ್ಯ ವಿಲೇವಾರಿ ಘಟಕದ ಮೇಲ್ವಿಚಾರಣೆ ಜವಾಬ್ದಾರಿ ವಹಿಸಲಾಗಿದೆ. ಗ್ರಾಮದ ಮನೆಗಳಿಂದ ಸಂಗ್ರಹಿಸಲಾಗುವ ಕಸ ಸಂಗ್ರಹಣಾ ಶುಲ್ಕದಿಂದ ಈ ಕಾರ್ಯದಲ್ಲಿ ನಿರತರಾದ ಸ್ವ-ಸಹಾಯ ಸಂಘದ ಮಹಿಳೆಯರಿಗೆ ವೇತನ ನೀಡಲಾಗುತ್ತಿದೆ.



# ಸುಧಾರಿತ ಯಂತ್ರಗಳ ಬಳಕೆ





ಜಿಲ್ಲಾ ಪಂಚಾಯಿತಿ ವತಿಯಿಂದ ಕಸಗಳನ್ನು ವಿಂಗಡಿಸಲು ಸಹಕಾರಿಯಾಗುವಂತೆ ರೋಲಿಂಗ್‌ಮಷಿನ್ ಮತ್ತು ವಿಂಗಡಿಸಲಾದ ಪ್ಲಾಸ್ಟಿಕ್ ಕಸಗಳನ್ನು ಕಂಪ್ರೆಸ್ ಮಾಡಿ ಸಂಗ್ರಹಿಸಡಲು ಮಷಿನ್ ನೀಡಲಾಗಿದೆ. ರೋಲಿಂಗ್ ಮಷಿನ್ ಮೂಲಕ ಗ್ರಾಮಗಳಿಂದ ಸಂಗ್ರಹಿಸಲಾದ ಒಣ ಕಸಗಳನ್ನು ಪ್ಲಾಸ್ಟಿಕ್, ಪ್ಲಾಸ್ಟಿಕ್ ಬಾಟಲ್, ಗಾಜು, ಪ್ಲಾಸ್ಟಿಕ್ ಚೀಲ ಹೀಗೆ ವಿವಿಧ ವರ್ಗಗಳಾಗಿ ಪ್ರತೇಕವಾಗಿ ವಿಂಗಡಿಸಲಾಗುತ್ತದೆ. ಬೇಲಿಂಗ್ ಮಷಿನ್ ಸಹಾಯದಿಂದ ಪ್ರತೇಕಿಸಲಾದ ಪ್ಲಾಸ್ಟಿಕ್, ಪ್ಲಾಸ್ಟಿಕ್ ಬಾಟಲ್, ಪ್ಲಾಸ್ಟಿಕ್ ಚೀಲ, ಪ್ಲಾಸ್ಟಿಕ್ ಕವರ್‌ಗಳನ್ನು ಬೇಲಿಂಗ್ ಮಾಡಿ ಪ್ರತೇಕವಾಗಿ ಸಂಗ್ರಹಿಸಲಾಗುತ್ತದೆ. ಅತ್ತ ಪ್ರತಿ ದಿನ ಗ್ರಾಮಗಳಿಂದ ಸಂಗ್ರಹಿಸಲಾದ ಹಸಿ ಕಸವನ್ನು ಘನತ್ಯಾಜ್ಯ ವಿಲೇವಾರಿ ಘಟಕದ ಸಮೀಪದಲ್ಲಿಯೇ ಒಂದು ಗೊಬ್ಬರದಗುಂಡಿ ನಿರ್ಮಿಸಿ ಅದರಿಂದ ಗೊಬ್ಬರ ತಯಾರಿಸಲಾಗುತ್ತಿದೆ. ಒಟ್ಟಿನಲ್ಲಿ ಬುಕ್ಕಾಂಬುಧಿ ಗ್ರಾಮ ಪಂಚಾಯಿತಿಯಲ್ಲಿ ತ್ಯಾಜ್ಯ ಸಂಗ್ರಹಣೆ ಹಾಗೂ ನಿರ್ವಹಣೆಯನ್ನು ವ್ಯವಸ್ಥಿತವಾಗಿ ಹಾಗೂ ವೈಜ್ಞಾನಿಕವಾಗಿ ಮಾಡಲಾಗುತ್ತಿದ್ದು ಜಿಲ್ಲೆಯಲ್ಲೇ ಮಾದರಿಯಾಗಿದೆ.